Akashvani : Bangalore
Regional Bulletin In Kannada
04.11.2024 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ವಿಧಾನಸಭಾ ಉಪಚುನಾವಣೆ; ವಿವಿಧ ರಾಜಕೀಯ ಪಕ್ಷಗಳಿಂದ ಬಿರುಸಿನ ಪ್ರಚಾರ
- ಬಿಜೆಪಿ ಸರ್ಕಾರದಿಂದ ವಕ್ಫ್ ಆಸ್ತಿ ತೆರವಿಗೆ ೨೧೬ ನೋಟೀಸ್ - ಮುಖ್ಯಮಂತ್ರಿ ಸಿದ್ದರಾಮಯ್ಯ
- ವಕ್ಫ್ ವಿವಾದ; ರಾಜ್ಯಾದ್ಯಂತ ಬಿಜೆಪಿ ಪ್ರತಿಭಟನೆ
- ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಸ್ಮರಣಾರ್ಥ ವಿಶೇಷ ಜಂಟಿ ಅಧಿವೇಶನ; ಅಮೆರಿಕ ಮಾಜಿ ಅಧ್ಯಕ್ಷ ಬರಾಕ್ ಒಬಾಮಗೆ ಆಹ್ವಾನ

<><*<><>*><>

ವಿಧಾನಸಭಾ ಉಪಚುನಾವಣೆಯಲ್ಲಿ ರಾಜಕೀಯ ಪಕ್ಷಗಳ ಪ್ರಚಾರ ಬಿರುಸುಗೊಂಡಿದೆ. ಚನ್ನಪಟ್ಟಣ ಕಾಂಗ್ರೆಸ್ ಅಭ್ಯರ್ಥಿ ಸಿ.ಪಿಯೋಗೇಶ್ವರ್ ಪರ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತಯಾಚಿಸಿದರು. ಸಚಿವರಾದ ರಾಮಲಿಂಗಾರೆಡ್ಡಿ, ವೆಂಕಟೇಶ್, ಡಾ.ಎಂ.ಸಿ.ಸುಧಾಕರ್, ಭೈರತಿ ಸುರೇಶ್ ಸೇರಿದಂತೆ ಹಲವು ಮುಖಂಡರು ಸಿ.ಪಿ.ಯೋಗೇಶ್ವರ್ ಗೆಲ್ಲಿಸುವಂತೆ ಮನವಿ ಮಾಡಿದರು. ಇನ್ನೊಂದೆಡೆ ಎನ್‌ಡಿಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಪರ ಪತ್ನಿ ರೇವತಿ ಚನ್ನಪಟ್ಟಣದಲ್ಲಿ ಪಾಲಿಟೆಕ್ನಿಕ್ ಕಾಲೇಜು ಮತ್ತು ಮಹಿಳಾ ಕಾಲೇಜು ಬಳಿ ಮತದಾರರು ಹಾಗೂ ವಿದ್ಯಾರ್ಥಿಗಳನ್ನು ಭೇಟಿ ಮಾಡಿ ಮತಯಾಚಿಸಿದರು. ಚನ್ನಪಟ್ಟಣದಲ್ಲಿ ಕೇಂದ್ರ ಸಚಿವ ವಿ.ಸೋಮಣ್ಣ ಮಾತನಾಡಿ, ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಮತ್ತು ಅವರ ಕುಟುಂಬ ರಾಮನಗರ ಜಿಲ್ಲೆಗೆ ನೀಡಿರುವ ಕೊಡುಗೆ ಅಪಾರ ಎಂದು ಹೇಳಿದರು.

<><*<><>*><>

ಶಿಗ್ಗಾಂವಿ ವಿಧಾನಸಭಾ ಉಪಚುನಾವಣೆ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕಾಂಗ್ರೆಸ್ ಅಭ್ಯರ್ಥಿ ಯಾಸಿರ್ ಅಹಮ್ಮದ್ ಖಾನ್ ಪಠಾಣ್ ಪರ ಇಂದು ಮತ್ತು ನಾಳೆ ಮತ ಯಾಚಿಸಲಿದ್ದಾರೆ. ಶಿಗ್ಗಾಂವಿಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗೆಲುವು ಖಚಿತ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಬಿಜೆಪಿ ಅಭ್ಯರ್ಥಿ ಭರತ್ ಬೊಮ್ಮಾಯಿ ಪರ ಕ್ಷೇತ್ರದ ವಿವಿಧೆಡೆ ತಾಯಿ ಚೆನ್ನಮ್ಮ ಬಸವರಾಜ ಬೊಮ್ಮಾಯಿ ಪ್ರಚಾರ ನಡೆಸಿದರು. ಈ ನಡುವೆ ಬಿಜೆಪಿ ನಾಯಕರಾದ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಸಂಸದ ಬಸವರಾಜ ಬೊಮ್ಮಾಯಿ ಸೇರಿದಂತೆ ಹಿರಿಯ ಮುಖಂಡರು ಇಂದು ಭರತ್ ಬೊಮ್ಮಾಯಿ ಪರ ಪ್ರಚಾರ ನಡೆಸಲಿದ್ದಾರೆ. ಬಳ್ಳಾರಿ ಜಿಲ್ಲೆ

ಸಂಡೂರು ವಿಧಾನಸಭಾ ಕ್ಷೇತ್ರದ ಉಪಚುನಾವಣೆ ಹಿನ್ನಲೆಯಲ್ಲಿ ಬಿಜೆಪಿ ಅಭ್ಯರ್ಥಿ ಬಂಗಾರು ಹನುಮಂತು ಪರ ನಿನ್ನೆ ರಾತ್ರಿ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಬೃಹತ್ ರೋಡ್ ಶೋ ನಡೆಸಿ ಮತಯಾಚನೆ ಮಾಡಿದರು.

<><*<><>*><>

ವಕ್ಫ್ ವಿವಾದ ಕುರಿತಂತೆ ಬಿಜೆಪಿ ನಾಯಕರ ರಾಜಕಾರಣದ ವಿರುದ್ಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು ಬಿಜೆಪಿ ಅವಧಿಯಲ್ಲಿ ವಕ್ಫ್ ಆಸ್ತಿ ತೆರವುಗೊಳಿಸಲು ೨೧೬ ಪ್ರಕರಣಗಳಲ್ಲಿ ನೊಟೀಸ್ ನೀಡಲಾಗಿತ್ತು ಎಂದು ಸ್ಪಷ್ಟಪಡಿಸಿದ್ದಾರೆ. ವಕ್ಫ್ ಆಸ್ತಿ ಕಾಪಾಡುತ್ತೇನೆ ಎಂದಿದ್ದ ಅಂದಿನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಈಗ ವರಸೆ ಬದಲಾಯಿಸಿದ್ದೇಕೆ ಎಂದು ಪ್ರಶ್ನಿಸಿದ್ದಾರೆ. ಈ ಹಿಂದಿನ ಮುಖ್ಯಮಂತ್ರಿಗಳಾಗಿದ್ದ ಯಡಿಯೂರಪ್ಪ, ಸದಾನಂದ ಗೌಡ, ಜಗದೀಶ್ ಶೆಟ್ಟರ್, ಎಚ್.ಡಿ.ಕುಮಾರಸ್ವಾಮಿ ಇದ್ದಾಗ ಯಾಕೆ ನೋಟಿಸ್ ನೀಡಲಾಗಿತ್ತು ಎಂದು ಪ್ರಶ್ನಿಸಿದ್ದಾರೆ. ವಕ್ಫ್ ಆಸ್ತಿ ವಿಚಾರ ಗೊತ್ತಾದ ತಕ್ಷಣವೇ ತಮ್ಮ ಸರ್ಕಾರ ನೋಟಿಸ್ ಹಿಂಪಡೆದಿದೆ ಎಂದು ಮುಖ್ಯಮಂತ್ರಿ ಸ್ಪಷ್ಟನೆ ನೀಡಿದ್ದಾರೆ.

ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ

<><*<><>*><>

ವಕ್ಫ್ ಆಸ್ತಿ ಕುರಿತು ಸರ್ಕಾರ ಗೆಜೆಟ್ ಅಧಿಸೂಚನೆ ಹಿಂಪಡೆಯಬೇಕು. ಅಧಿಕಾರ ದುರ್ಬಳಕೆ ಕುರಿತು ಸಿಬಿಐ ತನಿಖೆ ನಡೆಸಬೇಕು. ವಿವಾದಕ್ಕೆ ಕಾರಣರಾದ ಸಚಿವ ಜಮೀರ್ ಅಹಮ್ಮದ್ ಅವರನ್ನು ಸಂಪುಟದಿಂದ ವಜಾಮಾಡಬೇಕೆಂದು ಒತ್ತಾಯಿಸಿ ಬಿಜೆಪಿ ರಾಜ್ಯಾದ್ಯಂತ ಪ್ರತಿಭಟನೆ ನಡೆಸುತ್ತಿದೆ. ಬೆಂಗಳೂರಿನ ಕೆ.ಆರ್. ಪುರಂನಲ್ಲಿ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ, ಮಾಜಿ ಸಚಿವ ಬೈರತಿ ಬಸವರಾಜು ನೇತೃತ್ವದಲ್ಲಿ ಬಿಜೆಪಿ ಕಾರ್ಯಕರ್ತರು ಹಾಗೂ ಸಾರ್ವಜನಿಕರು ಪ್ರತಿಭಟನೆ ನಡೆಸಿದರು. ಈ ವೇಳೆ ಮಾತನಾಡಿದ ಆರ್. ಅಶೋಕ, ವಕ್ಫ್ ಆಸ್ತಿ ವಿಚಾರದಲ್ಲಿ ರಾಜಕೀಯ ದುರುದ್ದೇಶ ಎನ್ನುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆರೋಪದಲ್ಲಿ ಯಾವುದೇ ಹುರಳಿಲ್ಲ ಎಂದು ತಿಳಿಸಿದರು. ಗೆಜೆಟ್ ನೋಟಿಫಿಕೇಶನ್ ವಾಪಸ್ಸು ಪಡೆಯುವರೆಗೂ ಬಿಜೆಪಿ ಹೋರಾಟ ನಿಲ್ಲುವುದಿಲ್ಲ ಎಂದು ಸ್ಪಷ್ಟಪಡಿಸಿದರು. ರಾಜ್ಯ ಸರ್ಕಾರದ ನಡೆ ಖಂಡಿಸಿ ಹಾವೇರಿಯ ಶಿಗ್ಗಾಂವಿಯಲ್ಲಿ ನಡೆದ ಪ್ರತಿಭಟನಾ ರ್‍ಯಾಲಿಯಲ್ಲಿ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಸಂಸದ ಬಸವರಾಜ ಬೊಮ್ಮಾಯಿ, ಮಾಜಿ ಸಂಸದ ಪ್ರತಾಪ್ ಸಿಂಹ, ಸಿಟಿ ರವಿ, ಅರವಿಂದ ಬೆಲ್ಲದ್, ಶ್ರೀರಾಮುಲು ಸೇರಿದಂತೆ ಅನೇಕ ಮುಖಂಡರು ಭಾಗವಹಿಸಿ ರಾಜ್ಯ ಸರ್ಕಾರದ ನಡೆಯನ್ನು ಟೀಕಿಸಿದರು. ಈ ವೇಳೆ ಮಾತನಾಡಿದ ಕೇಂದ್ರ ಸಚಿವ ಪ್ರಲ್ಹಾದ್ ಜ್ಯೋಶಿ, ವಕ್ಫ್ ಆಸ್ತಿ ಕುರಿತ ಗೆಜೆಟ್ ಅಧಿಸೂಚನೆಯನ್ನು ಈ ಕೂಡಲೇ ಹಿಂಪಡೆಯಬೇಕು ಆಗ್ರಹಿಸಿದ್ದಾರೆ. ಅಧಿಕಾರ

ದುರ್ಬಳಕೆ ಕುರಿತು ಸಿಬಿಐ ತನಿಖೆ ನಡೆಸುವುದರ ಜೊತೆಗೆ ವಿವಾದಕ್ಕೆ ಕಾರಣವಾದ ಸಚಿವ ಜಮೀರ್ ಅಹ್ಮದ್ ಖಾನ್ ಅವರನ್ನು ಸಚಿವ ಸಂಪುಟದಿಂದ ವಜಾಗೊಳಿಸಬೇಕೆಂಬ ಒತ್ತಾಯಿಸಿದ್ದಾರೆ. ವಕ್ಫ್ ಸಚಿವ ಜಮೀರ್ ಅಹಮದ್ ಅವರನ್ನು ಸಚಿವ ಸಂಪುಟದಿಂದ ಕೈಬಿಡುವಂತೆ ಒತ್ತಾಯಿಸಿ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು. ರಾಜ್ಯದ ಹಲವೆಡೆ ರೈತರ ಜಮೀನಿನನಲ್ಲಿ ವಕ್ಫ್ ಆಸ್ತಿ ಎಂದು ನಮೂದಾಗಿದ್ದು, ಕೂಡಲೆ ಇದನ್ನು ರದ್ದುಗೊಳಿಸಬೇಕು ಎಂದು ಚಿಕ್ಕಮಗಳೂರು ನಗರದ ಹನುಮಂತ್ಯಪ್ಪ ವೃತದಲ್ಲಿ ಬಿ.ಜೆ.ಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು. ವಕ್ಫ್ ಹೆಸರಿನಲ್ಲಿ ರೈತರ ಭೂಮಿ ಕಬಳಿಸಲು ರಾಜ್ಯ ಸರ್ಕಾರ ಹುನ್ನಾರ ನಡೆಸಿದೆ ಎಂದು ಆಪಾಧಿಸಿ ದಾವವಣಗೆರೆಯಲ್ಲಿಂದು ಜಿಲ್ಲಾ ಬಿಜೆಪಿ ಕಾರ್ಯಕರ್ತರು ಬೃಹತ್ ಪ್ರತಿಭಟನೆ ನಡೆಸಿದರು.ಹೊನ್ನಾಳಿಯಲ್ಲೂ ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿ ಕೆಲ ಕಾಲ ರಸ್ತೆ ತಡೆ ನಡೆಸಿದರು.

<><*<><>*><>

ಬೆಳಗಾವಿಯಲ್ಲಿ ಮಹಾತ್ಮಾಗಾಂಧಿಜಿಯವರ ಅಧ್ಯಕ್ಷತೆಯಲ್ಲಿ ನಡೆದ ೧೯೨೪ರ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವದ ಸ್ಮರಣಾರ್ಥ ಸರ್ಕಾರ ಜಂಟಿ ವಿಧಾನಸಭೆ ವಿಶೇಷ ಅಧಿವೇಶನ ಆಯೋಜಿಸಿದೆ. ಇದರಲ್ಲಿ ಪಾಲ್ಗೊಳ್ಳುವಂತೆ ರಾಜ್ಯ ಸರ್ಕಾರ ಅಮೆರಿಕ ಮಾಜಿ ಅಧ್ಯಕ್ಷ ಬರಾಕ್ ಒಬಾಮ ಅವರನ್ನು ಆಹ್ವಾನಿಸಿದೆ. ಗದಗದಲ್ಲಿ ಈ ಕುರಿತಂತೆ ಮಾಹಿತಿ ನೀಡಿರುವ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್, ಬರಾಕ್ ಒಬಾಮ ಅವರಿಗೆ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಈಗಾಗಲೇ ಪತ್ರ ಕಳುಹಿಸಿದ್ದಾರೆ. ಇದೊಂದು ಅರ್ಥಪೂರ್ಣ ಕಾರ್ಯಕ್ರಮವಾಗಲಿದೆ ಎಂದು ತಿಳಿಸಿದ್ದಾರೆ. ರಾಜ್ಯಾದ್ಯಂತ ಮಹಾತ್ಮಗಾಂಧೀಜಿಯವರು ೧೨೦ ಸ್ಥಳಗಳಿಗೆ ಭೇಟಿ ನೀಡಿದ್ದು, ಆಯ್ದ ೪೦ ಸ್ಥಳಗಳಲ್ಲಿ ಸ್ಮಾರಕಗಳನ್ನು ನಿರ್ಮಿಸಲಾಗುವುದು. ಡಿಸೆಂಬರ್ ೨೬ ಮತ್ತು ೨೭ ರಂದು ರಾಜ್ಯದ ವಿವಿಧ ಜಿಲ್ಲೆಗಳಿಂದ ರಥಯಾತ್ರೆ ಜ್ಯೋತಿ ಬೆಳಗಾವಿಗೆ ಆಗಮಿಸಲಿದೆ ಎಂದು ಹೇಳಿದ್ದಾರೆ.

<><*<><>*><>

ಯಾರ್ಯಾರು ಏನೇನು ಅಭಿವೃದ್ಧಿ ಕೆಲಸ ಮಾಡಿದ್ದಾರೆ ಎನ್ನುವುದರ ಆಧಾರದ ಮೇಲೆ ಈ ಬಾರಿಯ ಚುನಾವಣೆಯಲ್ಲಿ ಜನ ತೀರ್ಮಾನ ಮಾಡಲಿದ್ದಾರೆ ಎಂದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಚದುರಂಗ ಆಡಿದವರೆಲ್ಲಾ ಮುಳುಗಿ ಹೋಗಿದ್ದಾರೆ ಎಂದು ಹೇಳಿದ್ದಾರೆ. ವಕ್ಫ್ ವಿಚಾರವಾಗಿ ಬಿಜೆಪಿ ಪ್ರತಿಭಟನೆ

ನಡೆಸುತ್ತಿರುವ ಬಗ್ಗೆ ಪ್ರತಿಕ್ರಿಯಿಸಿ ಬಿಜೆಪಿಯವರು ರಾಜಕೀಯ ಮಾಡುತ್ತಿದ್ದಾರೆ ಎಂದು ವ್ಯಂಗ್ಯವಾಡಿದ್ದಾರೆ.

<><*<><>*><>

ಹಾಸನಾಂಬ ದೇವಿಯ ಹುಂಡಿ ಎಣಿಕೆ ಕಾರ್ಯ ಹಾಸನ ನಗರದ ಚನ್ನಕೇಶವ ದೇವಾಲಯದ ಆವರಣದಲ್ಲಿ ನಡೆಯುತ್ತಿದೆ. ಉಪ ವಿಭಾಗಾಧಿಕಾರಿ ಹಾಗೂ ದೇವಾಲಯದ ಆಡಳಿತ ಅಧಿಕಾರಿ ಮಾರುತಿ ಸಮಕ್ಷಮದಲ್ಲಿ ಕಂದಾಯ ಇಲಾಖೆ, ಮುಜರಾಯಿ ಇಲಾಖೆ, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳು ಸೇರಿ ಸುಮಾರು ೫೦೦ಕ್ಕೂ ಹೆಚ್ಚು ಸಿಬ್ಬಂದಿ ಹುಂಡಿ ಎಣಿಕೆ ಕಾರ್ಯದಲ್ಲಿ ನಿರತರಾಗಿದ್ದಾರೆ. ಕಾಣಿಕೆ ರೂಪದಲ್ಲಿ ಭಕ್ತರು ಹುಂಡಿಗೆ ಹಾಕಿರುವ ಹಣ, ಬೆಳ್ಳಿ ಹಾಗೂ ಚಿನ್ನಾಭರಣಗಳನ್ನು ಎಣಿಕೆ ಮಾಡಲಾಗುತ್ತಿದೆ. ಬ್ಯಾಂಕ್ ಸಿಬ್ಬಂದಿ ಕೂಡ ಎಣಿಕೆ ಕಾರ್ಯದಲ್ಲಿ ಭಾಗಿಯಾಗಿದ್ದಾರೆ.

<><*<><>*><>

ಕೇಂದ್ರ ಗೃಹ ಸಚಿವಾಲಯ ನೀಡುವ ದಕ್ಷತಾ ಪದಕಕ್ಕೆ ಈ ಬಾರಿ ಕರ್ನಾಟಕದಿಂದ ಏಳು ಜನ ಪೊಲೀಸ್ ಅಧಿಕಾರಿಗಳು ಭಾಜನರಾಗಿದ್ದಾರೆ. ಬೆಳಗಾವಿಯ ಪ್ರಾದೇಶಿಕ ವಿಧಿ ವಿಜ್ಞಾನ ಪ್ರಯೋಗಾಲಯದಲ್ಲಿ ಉಪ ನಿರ್ದೇಶಕರಾಗಿ ಸೇವೆ ಸಲ್ಲಿಸುತ್ತಿರುವ ಪ್ರವೀಣ ಸಂಗನಾಳಮಠ ಗೃಹ ಸಚಿವರ ದಕ್ಷತಾ ಪದಕಕ್ಕೆ ಭಾಜನರಾಗಿದ್ದಾರೆ. ೨೦ ವರ್ಷಗಳ ಸುದೀರ್ಘ ವಿಶೇಷ ಸೇವೆ ಹಾಗೂ ತನಿಖೆಗೆ ಪೂರಕವಾದ ಅಂತರಾಷ್ಟ್ರೀಯ ಮಟ್ಟದ ಸಂಶೋಧನಾ ಪ್ರಬಂಧಗಳನ್ನು ಮಂಡಿಸಿರುವ ಹಿನ್ನೆಲೆಯಲ್ಲಿ ಪ್ರಶಸ್ತಿ ಆಯ್ಕೆ ಮಾಡಲಾಗಿದೆ. ಆಕಾಶವಾಣಿಯೊಂದಿಗೆ ಪ್ರವೀಣ ಸಂಗನಾಳಮಠ ಸಂತಸ ಹಂಚಿಕೊಂಡಿದ್ದಾರೆ.

ಧ್ವನಿ: ಪ್ರವೀಣ ಸಂಗನಾಳಮಠ

<><*<><>*><>

ಉತ್ತರ ಭಾರತದಲ್ಲಿ ನಡೆಯುವ ಛತ್ ಪೂಜಾ ಆಚರಣೆಗಾಗಿ ತೆರಳುವ ಪ್ರಯಾಣಿಕರ ಅನುಕೂಲಕ್ಕಾಗಿ ನೈಋತ್ಯ ರೈಲ್ವೆಯು ಯಶವಂತಪುರ-ದಾನಾಪುರ-ಎಸ್ಎಂವಿಟಿ ಬೆಂಗಳೂರು ನಿಲ್ದಾಣಗಳ ನಡುವೆ ವಿಶೇಷ ಎಕ್ಸ್ ಪ್ರೆಸ್ ರೈಲು ಓಡಿಸಲಿದೆ. ರೈಲುಗಳ ಆಗಮನ, ನಿರ್ಗಮನ ಕುರಿತು ಹೆಚ್ಚಿನ ಮಾಹಿತಿಗಾಗಿ ಪ್ರಯಾಣಿಕರು www.enquiry.indianrail.gov.in ಅಧಿಕೃತ ವೆಬ್ ಸೈಟ್ ಗೆ ಭೇಟಿ ನೀಡಬಹುದು, ಅಥವಾ ಸಹಾಯವಾಣಿ ೧೩೯ ನಂಬರಗೆ ಡಯಲ್ ಮಾಡಿ ಮಾಹಿತಿ ಪಡೆದುಕೊಳ್ಳಬಹುದು ಎಂದು ನೈಋತ್ಯ ರೈಲ್ವೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

<><*<><>*><>

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಹಾಗೂ ಪ್ರಾದೇಶಿಕ ಭವಿಷ್ಯ ನಿಧಿ ಕಛೇರಿಯ ಸಹಯೋಗದೊಂದಿಗೆ ಪ್ರಯಾಸ್ ಯೋಜನೆಯಡಿಯಲ್ಲಿ ಅಕ್ಟೋಬರ್ ೨೦೨೪ರ ಅಂತ್ಯಕ್ಕೆ ಒಟ್ಟು ೩೯೦ಕ್ಕೂ ಹೆಚ್ಚು ನೌಕರರ ಪಿಂಚಣಿ ಪಾವತಿ ಆದೇಶಗಳನ್ನು ಸಂಸ್ಥೆಯ ನೌಕರರಿಗೆ ವಿತರಿಸಲಾಗಿದೆ. ಪ್ರಯಾಸ್ ಯೋಜನೆಯಡಿಯಲ್ಲಿ ಅತೀ ಹೆಚ್ಚು ಪಿಂಚಣಿ ಆದೇಶಗಳನ್ನು ನೀಡುತ್ತಿರುವ ಸ್ಥಾಪಿತ ಸಂಸ್ಥೆಗಳಲ್ಲಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯೂ ಒಂದಾಗಿದೆ. ಈ ಯೋಜನೆಯಡಿ ನೌಕರರು ೫೮ ವರ್ಷ ತುಂಬಿದ ಮಾಹೆಯಲ್ಲಿಯೇ ಪಿಂಚಣಿ ಪಾವತಿ ಆದೇಶವನ್ನು ಪಡೆಯುವ ಸೌಲಭ್ಯ ಒದಗಿಸಲಾಗಿದೆ. ಬಿಎಂಟಿಸಿ, ಈ ಸಾಧನೆಗೆ ಪ್ರಾದೇಶಿಕ ಭವಿಷ್ಯ ನಿಧಿ ಆಯುಕ್ತರು, ಸಂಸ್ಥೆಗೆ ಪ್ರಶಂಸನೀಯ ಪಾರಿತೋಷಕ ನೀಡಿ ಗೌರವಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>